# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 879 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:11-02-2020

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**
ಎಲ್ಲಾ ಜಿಲ್ಲಾ ಪಂಚಾಯತಿಯ,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

**ವಿಷಯ:** ಕರ್ನಾಟಕ ಮಾಹಿತಿ ಆಯೋಗವು ಪ್ರಕರಣ ಸಂಖ್ಯೆ:ಕಮಾಆ 2146 ಎಪಿಎಲ್ 2018 ರಲ್ಲಿ ದಿನಾಂಕ:03-10-2019 ರಂದು ನೀಡಿರುವ ಆದೇಶದ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಆರ್. ವೀರಭದ್ರಸ್ವಾಮಿ ಬಿನ್ ಲೇಟ್ ರುದ್ರಪ್ಪ, ಹೆನ್ನಾಗರ ಗ್ರಾಮ, ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಮಾಹಿತಿ ಹಕ್ಕು ಅಧಿನಿಯಮದಡಿ ಸಲ್ಲಿಸಿರುವ ಮೇಲ್ಮನವಿಗೆ ಸಂಬಂಧಿಸಿದಂತೆ ಕರ್ನಾಟಕ ಮಾಹಿತಿ ಆಯೋಗವು ಪ್ರಕರಣ ಸಂಖ್ಯೆ:ಕಮಾಆ 2146 ಎಪಿಎಲ್ 2018 ರಲ್ಲಿ ದಿನಾಂಕ:03-10-2019 ರಂದು ನೀಡಿರುವ ಆದೇಶ ಈ ಕೆಳಕಂಡಂತಿದೆ.

"ದಿನಾಂಕ:16-09-2019 ರ ಆದೇಶದಂತೆ ಕ್ರಮವನ್ನು ವಹಿಸಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಹಲವಾರು ಗ್ರಾಮ ಪಂಚಾಯತಿಯಲ್ಲಿ ವ್ಯವಸಾಯದ ಜಮೀನನ್ನು ಖಾತಾ ಮಾಡುತ್ತಿರುವ ವಿಚಾರದಲ್ಲಿ ಆಯೋಗದಲ್ಲಿ ಹಲವಾರು ಪ್ರಕರಣಗಳು ದಾಖಲಾಗಿರುತ್ತವೆ. ಈ ನಿಟ್ಟಿನಲ್ಲಿ ನಿಖರವಾಗಿ ನಿಗದಿತ ಅವಧಿಯೊಳಗೆ ಕ್ರಮವನ್ನು ವಹಿಸುವಂತೆ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ / ತಾಲ್ಲೂಕು ಪಂಚಾಯತಿ ರವರುಗಳಿಗೆ ಸೂಚನೆಯನ್ನು ನೀಡಬೇಕೆಂದು ಹಾಗೂ ವರದಿಯನ್ನು ಸಲ್ಲಿಸಬೇಕೆಂದು ಶ್ರೀ ಎಲ್.ಕೆ. ಅತೀಕ್, ಭಾ.ಆ.ಸೇ. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಮಾಹಿತಿ ಹಕ್ಕು ಅಧಿನಿಯಮ, 2005 ರ ಕಲಂ 19(8)(ಎ) ರನ್ವಯ ಮತ್ತೊಮ್ಮೆ ನಿರ್ದೇಶಿಸಿ, ಪ್ರಕರಣವನ್ನು ಮುಂದೂಡಲಾಗಿದೆ."

ರಿಟ್ ಅರ್ಜಿ ಸಂಖ್ಯೆ: 12278/2007ರಲ್ಲಿ ಮಾನ್ಯ ಉಚ್ಚನ್ಯಾಯಾಲಯವು ನೀಡಿದ್ದ ನಿರ್ದೇಶನದನ್ವಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಯುವ ಅನಧಿಕೃತ ಆಸ್ತಿಗಳ ನೊಂದಣಿ, ಮಾರಾಟ ಮುಂತಾದ ವಹಿವಾಟುಗಳನ್ನು ತಡೆಗಟ್ಟುವ ಸಲುವಾಗಿ ಇ-ಸ್ವತ್ತು ತಂತ್ರಾಂಶ ರೂಪಿಸಿ ದಿನಾಂಕ:15-06-2013 ರಿಂದ ಜಾರಿಗೊಳಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ಆಸ್ತಿ ವಿವರವನ್ನು ನಮೂನೆ-9 ರಲ್ಲಿ ಹಾಗೂ ಅಂತಹ ಆಸ್ತಿಯ ತೆರಿಗೆ ಬೇಡಿಕೆ, ವಸೂಲಾತಿ ಮತ್ತು ಬಾಕಿ ವಿವರಗಳನ್ನು ನಮೂನೆ-11ಎ ರಲ್ಲಿ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ರಲ್ಲಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ತನ್ನ ಡಿಜಿಟಲ್ ಸಹಿಯ ಮೂಲಕ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸಲು ಅನುವು ಮಾಡಕೊಡಲಾಗಿದೆ. ಈ ಉದ್ದೇಶಕ್ಕಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಅವಶ್ಯ ತಿದ್ದುಪಡಿಗಳನ್ನು ತರಲಾಗಿದೆ. ಇ-ಸ್ವತ್ತು ಅನುಷ್ಠಾನದ ಭಾಗವಾಗಿ ಹಲವಾರು ಸುತ್ತೋಲೆಗಳನ್ನು ಹೊರಡಿಸಲಾಗಿದೆ.

ಆದುದರಿಂದ ಸರ್ಕಾರವು ಹೊರಡಿಸಿರುವ ನಿಯಮಗಳು, ಸುತ್ತೋಲೆಗಳು ಹಾಗೂ ಆದೇಶಗಳ ಅನುಸಾರ ನಿಯಮಾನುಸಾರ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಸಂಬಂಧಿಸಿದಂತೆ ಆಸ್ತಿ ವಿವರವನ್ನು ನಮೂನೆ 9 ರಲ್ಲಿ ಹಾಗೂ ಆ ಆಸ್ತಿಯ ತೆರಿಗೆ ಬೇಡಿಕೆ, ವಸೂಲಾತಿ ಮತ್ತು ಬಾಕಿ ವಿವರಗಳನ್ನು ನಮೂನೆ 11 ಎ ರಲ್ಲಿ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ರಲ್ಲಿ ಡಿಜಿಟಲ್ ಸಹಿಯ ಮೂಲಕ ವಿತರಿಸಲು ಕ್ರಮ ಕೈಗೊಳ್ಳುವಂತೆ ಮತ್ತೊಮ್ಮೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

B. Naveenkumar 11/02/2020.

(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ: ಅಗತ್ಯ ಕ್ರಮಕ್ಕಾಗಿ**

1) ಅಧೀನ ಕಾರ್ಯದರ್ಶಿ, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.
2) ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
3) ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4) ಸಂಪಾದಕರು, ಕರ್ನಾಟಕ ವಿಕಾಸ/ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.